ಈ) ಕಾಮಗಾರಿ ನಿರ್ಮಾಣ ಕಾರ್ಯ ಕೈಗೆತ್ತಿಕೊಂಡಿರುವುದಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳು ಪ್ರಸ್ತುತ ಸಿದ್ಧಪಡಿಸಿರುವ ನೀಲಿನಕ್ಷೆಯನ್ನು ಪರಿಶೀಲಿಸಿ ಆಸನದ ಸಂಖ್ಯೆ ವಿಸ್ತರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಸಾಂಸ್ಕೃತಿಕ ಭವನಗಳ ಮಂಜೂರಾತಿ

218(595); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

1) ಚಿಂಚೋಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಹೋಬಳಿ ಮತ್ತು ಗ್ರಾಮಗಳಲ್ಲಿ ಸಾಂಸ್ಕೃತಿಕ ಚಟುವಟಿಕೆ, ಸಭೆ ಸಮಾರಂಭಗಳನ್ನು ನಡೆಸಲು ಸಾಂಸ್ಕೃತಿಕ ಭವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

2) ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ (ವಿವರ ನೀಡುವುದು)

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

1) ಇದೆ.

2) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಅಂಗನವಾಡಿಗಳ ಕಟ್ಟಡ ನಿರ್ಮಾಣ ಕಾಮಗಾರಿ

221(460); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಗೆ ಎಷ್ಟು ಅಂಗನವಾಡಿ ಕೇಂದ್ರಗಳು ಮಂಜೂರಾಗಿವೆ; ಇವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳನ್ನು ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡಗಳನ್ನು ಹೊಂದಿವೆ (ವಿವರ ನೀಡುವುದು);

ಆ) ಈ ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಎಷ್ಟು ಅನುದಾನ ಮಂಜೂರಾಗಿದೆ; ಎಷ್ಟು ವೆಚ್ಚ ಮಾಡಲಾಗಿದೆ; (ವಿವರ ನೀಡುವುದು);

ಇ) ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ನೀಡಿದ್ದರೂ ಸಹ ಹಲವಾರು ಕಟ್ಟಡಗಳು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಕಟ್ಟಡ ಕಾಮಗಾರಿಗಳು ಶೀಘ್ರವಾಗಿ ಪೂರ್ಣವಾಗಲು ಸರ್ಕಾರದ ವತಿಯಿಂದ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಬೀದರ್ ಜಿಲ್ಲೆಗೆ ಒಟ್ಟು 1890 ಅಂಗನವಾಡಿ ಕೇಂದ್ರಗಳು ಮಂಜೂರಾಗಿದ್ದು, ಈ ಪೈಕಿ 1169 ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಮತ್ತು 590 ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ. 131 ಕೇಂದ್ರಗಳು ಇತರೆ ಕಟ್ಟಡಗಳಲ್ಲಿ ನಡೆಯುತ್ತಿವೆ. ತಾಲ್ಲೂಕುವಾರು ವಿವರ ಕೆಳಕಂಡಂತಿದೆ.

ಶಿಶು ಅಭಿವೃದ್ಧಿ ಯೋಜನೆ/ತಾಲ್ಲೂಕು	ಮಂಜೂರಾದ ಕಟ್ಟಡಗಳು	ಸ್ವಂತ ಕಟ್ಟಡಗಳು	ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಕೇಂದ್ರಗಳು	ಇತರೆ ಕಟ್ಟಡಗಳಲ್ಲಿ ನಡೆಯುತ್ತಿರುವ ಕೇಂದ್ರಗಳು
ಬೀದರ್	466	237	208	21
ಬಾಲ್ಕಿ	338	212	101	25
ಬಸವಕಲ್ಯಾಣ	410	263	100	47
ಹುಮನಾಬಾದ್	325	227	80	18
ಔರಾದ್	351	230	101	20
ಒಟ್ಟು	**1890**	**1169**	**590**	**131**

ಆ) ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಮಂಜೂರಾದ ಅನುದಾನ ಮತ್ತು ವೆಚ್ಚದ ವಿವರ ಕೆಳಕಂಡಂತಿದೆ.

(ರೂ. ಲಕ್ಷಗಳಲ್ಲಿ)

ಯೋಜನೆ	ಮಂಜೂರಾದ ಅನುದಾನ	ವೆಚ್ಚ
ಆರ್.ಐ.ಡಿ.ಎಫ್ (2007–08 ರಿಂದ 2013–14ವರೆಗೆ)	1191.53	282.05
ವಿಶೇಷ ಅಭಿವೃದ್ಧಿ ಯೋಜನೆ (2008–09 ರಿಂದ 2014–15ವರೆಗೆ)	1165.44	546.20
ಎಂ.ಎನ್.ಡಿ.ಪಿ (2009–10 ರಿಂದ 2010–11)	303.00	214.66
ಒಟ್ಟು	**2659.97**	**1042.91**

ಇ) ಹೌದು

ಈ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:26.12.2014ರಂದು ಜರುಗಿದ ಸಭೆಯಲ್ಲಿ ಹೊಸ ಕಟ್ಟಡಗಳನ್ನು ಒಳಗೊಂಡಂತೆ ಅಪೂರ್ಣಗೊಂಡಿರುವ ಎಲ್ಲಾ ಅಂಗನವಾಡಿ ಕಟ್ಟಡಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಆಹಾರ ಸಾಮಾಗ್ರಿ ಗುತ್ತಿಗೆಯಲ್ಲಿನ ಅಕ್ರಮ

222(461); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆ ಅಂಗನವಾಡಿ ಮಕ್ಕಳಿಗೆ ಆಹಾರ ಸರಬರಾಜು ಮಾಡುವ ಗುತ್ತಿಗೆಯನ್ನು ಇಲ್ಲಿಯವರೆಗೆ ಅಂತಿಮಗೊಳಿಸದೇ ಇರಲು ಕಾರಣವೇನು;

ಆ) ಈ ಹಿಂದಿನ ಗುತ್ತಿಗೆ ಹಾಗೂ ಈಗಿನ ಗುತ್ತಿಗೆಯಲ್ಲಿ ಸಾಕಷ್ಟು ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;